# ಕರ್ನಾಟಕ ವಿಧಾನಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 138 |
| ಸದಸ್ಯರ ಹೆಸರು | ಎನ್. ರವಿಕುಮಾರ್ |
| ಉತ್ತರಿಸುವ ದಿನಾಂಕ | 28.01.2026 |
| ಉತ್ತರಿಸುವವರು | ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2022-23ನೇ ಸಾಲಿನ ಆಯವ್ಯಯದಲ್ಲಿ ಮುಜರಾಯಿ ಇಲಾಖೆ ಆಡಳಿತ ವ್ಯಾಪ್ತಿಗೆ ಒಳಪಟ್ಟಿರುವ ದೇವಸ್ಥಾನಗಳಿಗೆ ಸ್ವಾಯತ್ತತೆ ನೀಡಲು ಕ್ರಮ ವಹಿಸುವುದಾಗಿ ಘೋಷಿಸಿದ್ದು, ಅದರಂತೆ ಇದುವರೆಗೆ ಎಷ್ಟು ದೇವಸ್ಥಾನಗಳಿಗೆ ಸ್ವಾಯತ್ತತೆ ನೀಡಲಾಗಿದೆ; (ಜಿಲ್ಲಾವಾರು ಮಾಹಿತಿ ಒದಗಿಸುವುದು); | 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-367ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿದೆ.<br><br>**"ದೇವಾಲಯಗಳನ್ನು ಸರ್ಕಾರದ ನಿಯಂತ್ರಣದಿಂದ ಮುಕ್ತಗೊಳಿಸಬೇಕೆಂಬ ಬೇಡಿಕೆ ಬಹುಕಾಲದಿಂದ ಕೇಳಿ ಬರುತ್ತಿದೆ. ಭಕ್ತಾದಿಗಳ ಈ ಬೇಡಿಕೆಯನ್ನು ಪರಿಗಣಿಸಿ ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಯಲ್ಲಿರುವ ದೇವಾಲಯಗಳಿಗೆ ಸ್ವಾಯತ್ತತೆ ನೀಡಿ ಅಭಿವೃದ್ಧಿ ಕಾಮಗಾರಿಗಳ ವಿವೇಚನೆಯನ್ನು ದೇವಾಲಯಗಳಿಗೆ ಪ್ರತ್ಯಾಯೋಜಿಸಲು ಕಾನೂನು ಕ್ರಮ ಕೈಗೊಳ್ಳಲಾಗುವುದು"**<br><br>ಈ ಕುರಿತು ಕಾನೂನಾತ್ಮಕವಾಗಿ ಪರಿಶೀಲಿಸಿ ಆದೇಶ ಹೊರಡಿಸಿರುವುದಿಲ್ಲ.<br><br>ಆದಾಗ್ಯೂ, ಎ ಮತ್ತು ಬಿ ವರ್ಗದ ಧಾರ್ಮಿಕ ಸಂಸ್ಥೆಗಳಲ್ಲಿ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997ರ ಕಾಯ್ದೆ ಕಲಂ 25ರನ್ವಯ ಸ್ಥಳೀಯರನ್ನೊಳಗೊಂಡಂತೆ 09 ಜನ ಸದಸ್ಯರ ವ್ಯವಸ್ಥಾಪನಾ ಸಮಿತಿ ರಚಿಸಲಾಗುತ್ತದೆ. ಸದರಿ ಸಮಿತಿಯು ದೇವಾಲಯದ ವಾರ್ಷಿಕ ಆಯವ್ಯಯ ಮತ್ತು ಮೂಲಭೂತ ಸೌಕರ್ಯ ಕಲ್ಪಿಸುವುದು ಇತ್ಯಾದಿಗಳ ಕುರಿತಂತೆ ಚರ್ಚಿಸಿ ನಿರ್ಣಯ ಕೈಗೊಳ್ಳುತ್ತದೆ.<br><br>ಅದರಂತೆ, ದೇವಾಲಯದ ನಿಧಿಯಲ್ಲಿ ಸಂಗ್ರಹವಾಗುವ ಹಣವನ್ನು ದೇವಾಲಯದ ನಿರ್ವಹಣೆಗೆ ನಿತ್ಯಕಟ್ಟೆ, ಹೆಚ್ಚು ಕಟ್ಟೆ, ರಥೋತ್ಸವ, ಸಿಬ್ಬಂದಿ ವೆಚ್ಚ, ಅಭಿವೃದ್ಧಿ/ಜೀರ್ಣೋದ್ಧಾರ ಮತ್ತು ಮೂಲಭೂತ ಸೌಕರ್ಯ ಹಾಗೂ ದೇವಾಲಯದ ವತಿಯಿಂದ ನಡೆಸುವ ಶಿಕ್ಷಣ ಸಂಸ್ಥೆಗಳ ನಿರ್ವಹಣೆ ಉದ್ದೇಶ ಇತ್ಯಾದಿಗಳಿಗೆ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997ರ ಕಾಯ್ದೆ ಕಳ 36(1) ರಡಿಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಗೊಂಡ ಆಯವ್ಯಯದನ್ವಯ ಬಳಸಲಾಗುತ್ತಿದೆ. |
| ಆ) | ಒಂದು ಬಾರಿ ದೇವಸ್ಥಾನದ ಆಸ್ತಿ ಎಂದು ದಾಖಲೆಗಳಲ್ಲಿ ಬಂದ ಮೇಲೆ ಅದು ಖಾಯಂ ಆಗಿ ದೇವಸ್ಥಾನದ ಆಸ್ತಿಯೇ ಎಂಬುದರ ಕುರಿತು ಮಾಹಿತಿ ಒದಗಿಸುವುದು; | 1. ಒಂದು ಬಾರಿ ಯಾವುದೇ ಭೂಮಿ ದೇವಸ್ಥಾನದ ಭೂಮಿ ಎಂದು ಕಂಡು ಬಂದಲ್ಲಿ ಆ ಭೂಮಿಯು ಖಾಯಂ ಆಗಿ ದೇವಸ್ಥಾನದ ಭೂಮಿಯೇ ಆಗಿರುವಂತೆ ಮಾಡಬೇಕಾದಲ್ಲಿ, ಸದರಿ ಭೂಮಿಯನ್ನು ದೇವರ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ಹೆಸರಿನಲ್ಲಿಯೇ ಖಾತೆ/ಪಹಣಿ ಮಾಡುವುದರಿಂದ ಮಾತ್ರವೇ ಸಾಧ್ಯ,<br><br>2. ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ದೇವಾಲಯಗಳು/ಸಂಸ್ಥೆಗಳ ಬಹುತೇಕ ಜಮೀನುಗಳು ಇನಾಂ ರದ್ಧತಿ ಕಾಯ್ದೆ ಮತ್ತು ಭೂ ಸುಧಾರಣೆ ಕಾಯ್ದೆಗಳಡಿಯಲ್ಲಿ ಸರ್ಕಾರದಲ್ಲಿ ವಿಹಿತವಾಗಿದ್ದು ಈ ರೀತಿ ಸರ್ಕಾರದಲ್ಲಿ ವಿಹಿತವಾಗಿರುವ ಜಮೀನುಗಳನ್ನು ಹೊರತುಪಡಿಸಿ, ದೇವಾಲಯಕ್ಕೆ ಸೇರಿದ ಉಳಿದೆಲ್ಲ ಜಮೀನುಗಳನ್ನು ಆಯಾಯ ದೇವಾಲಯಗಳ ಹೆಸರಿನಲ್ಲಿಯೇ ಖಾತೆ/ ಪಹಣಿ ಮಾಡಲು ಕ್ರಮ ಕೈಗೊಳ್ಳಲಾಗಿರುತ್ತದೆ<br><br>3 ಸರ್ಕಾರದ ಮುಖ್ಯ ಕಾರ್ಯದರ್ಶಿ ಯವರು ದಿನಾಂಕ 11-12-2020ರ ಪತ್ರದಲ್ಲಿ ಧಾರ್ಮಿಕ ದತ್ತಿ ಇಲಾಖೆಯ ಜಮೀನುಗಳ ದಾಖಲೆಗಳನ್ನು ನವೀಕರಿಸಿ ನಿರ್ವಹಿಸಲು ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಕೂಡಲೇ ಅಗತ್ಯ ಕ್ರಮವಹಿಸುವಂತೆ ನಿರ್ದೇಶನವನ್ನು ನೀಡಿರುತ್ತಾರೆ. ಅದರಂತೆ ಕ್ರಮವಹಿಸ ಲಾಗಿರುತ್ತದೆ.<br><br>4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ ಇವರು ದಿನಾಂಕ:11-11-2021ರ ಪತ್ರದಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳಿಗೂ ಸೂಚನೆ ನೀಡಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಲಾದ ಅಧಿಸೂಚಿತ ದೇವಾಲಯಗಳ ಪಟ್ಟಿಯಲ್ಲಿರುವ ದೇವಸ್ಥಾನ/ಧಾರ್ಮಿಕ ಸಂಸ್ಥೆಗಳು ಹೊಂದಿರುವ ಜಮೀನು ಮತ್ತು ಅವುಗಳಿಗೆ ಸೇರಿರುವ ಇತರೆ ಜಮೀನುಗಳ ಆರ್.ಟಿ.ಸಿ.ಯಲ್ಲಿ "ದೇವಸ್ಥಾನದ ಹೆಸರು" ಮತ್ತು "ಧಾರ್ಮಿಕ ದತ್ತಿ ಇಲಾಖೆ' ಎಂದು ನಮೂದಿಸುವಂತೆ ಸ್ಪಷ್ಟ ನಿರ್ದೇಶನ ವನ್ನು ನೀಡಿರುತ್ತಾರೆ. ಅದರಂತೆ ಧಾರ್ಮಿಕ ದತ್ತಿ ಆಯುಕ್ತರೂ ಸಹ ಜಿಲ್ಲಾಧಿಕಾರಿಗಳಿಗೆ ಅರೆ ಸರ್ಕಾರಿ ಪತ್ರವನ್ನು ಬರೆದು ಸೂಚನೆ ನೀಡಿರುತ್ತಾರೆ.<br><br>5. ಮಾನ್ಯ ಉಚ್ಚ ನ್ಯಾಯಾಲಯದ ಪ್ರಕರಣದ ರಿಟ್ ಅರ್ಜಿ ಸಂಖ್ಯೆ :27/2018(LB-RES) ದಿನಾಂಕ:14-09-2023 ರಲ್ಲಿ .......... to the notice of the Endowment Commissioner. Who shall inform all the concerned authorities to make necessary entries in the name of the deity whenever any property is transferred to such temple. Either by a government agency or by a private person. All the properties are necessarily to stand in the name of the deity and the managing committee or any other person managing the temple would not have any individual right title or interest in the said property" ಎಂದು ಆದೇಶ ನೀಡಿದ್ದು, ಅದರನ್ವಯ ದೇವಾಲಯದ ಹೆಸರಿಗೆ ಖಾತೆ ಮಾಡಿ **ದೇವಾಲಯದ ಹೆಸರು-** |

| ಕ್ರ. ಸಂ. | ಪ್ರಶ್ನೆ | ಉತ್ತರ |
| --- | --- | --- |
| | | **ಧಾರ್ಮಿಕ ದತ್ತಿ ಇಲಾಖೆ** ಎಂದು ಪಹಣಿಯಲ್ಲಿ ನಮೂದಿಸುವ ಬಗ್ಗೆ ಕ್ರಮವಹಿಸಿ ಪಾಲನಾ ವರದಿಯನ್ನು ಸಲ್ಲಿಸುವಂತೆ ಈಗಾಗಲೇ ದಿನಾಂಕ: 20-08-2024ರ ಪತ್ರದಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.<br>6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಪತ್ರ ಸಂಖ್ಯೆ:ಕಂಇ.49.ಮುಅಬಿ.2021 ದಿನಾಂಕ: 21-09-2024ರ ಪತ್ರದಲ್ಲಿ ಧಾರ್ಮಿಕ ದತ್ತಿ ಇಲಾಖೆಯ ದೇವಾಲಯಗಳ ಆಸ್ತಿ/ ಜಮೀನುಗಳ ಇಂಡೀಕರಣ ಮತ್ತು ಅಳತೆ ಕಾರ್ಯ ಕುರಿತಂತೆ ಮೇಲುಸ್ತುವಾರಿ ಮಾಡಲು ಆಯುಕ್ತಾಲಯದ ಹಂತದಲ್ಲಿ ಹಿರಿಯ ಅಧಿಕಾರಿಯನ್ನು ಎಸ್ಟೇಟ್ ಆಫೀಸರ್ ರನ್ನಾಗಿ ನೇಮಿಸುವಂತೆ ಸೂಚಿಸಿದ್ದು, ಅದರಂತೆ ಧಾರ್ಮಿಕ ಆಯುಕ್ತರ ದಿನಾಂಕ:14-10-2024ರ ಆದೇಶದಂತೆ ಕೇಂದ್ರಸ್ಥಾನಿಕ ಸಹಾಯಕರು-2 ರವರನ್ನು ಎಸ್ಟೇಟ್ ಆಫೀಸರ್‌ರನ್ನಾಗಿ ನೇಮಿಸ ಲಾಗಿರುತ್ತದೆ.<br>7 ದಿನಾಂಕ:13-11-2024ರಂದು ನಡೆದ ರಾಜ್ಯ ಧಾರ್ಮಿಕ ಪರಿಷತ್ತಿನ ಸಭೆಯಲ್ಲಿ ಧಾರ್ಮಿಕ ದತ್ತಿ ಇಲಾಖೆಯ ಎಲ್ಲಾ ದೇವಾಲಯದ ಹೆಸರಿಗೆ ಖಾತೆ ದಾಖಲು ಮಾಡಿ **ದೇವಾಲಯದ ಹೆಸರು-ಧಾರ್ಮಿಕ ದತ್ತಿ ಇಲಾಖೆ** ಎಂದು ಪಹಣಿಯಲ್ಲಿ ನಮೂದಿಸುವ ಬಗ್ಗೆ ಸುದೀರ್ಘವಾಗಿ ಚರ್ಚಿಸಿ ದೇವಾಲಯದ ಆಸ್ತಿಗೆ ಖಾತೆ ದಾಖಲು ಮಾಡಿ **ದೇವಾಲಯದ ಹೆಸರು-ಧಾರ್ಮಿಕ ದತ್ತಿ ಇಲಾಖೆ, , ಕರ್ನಾಟಕ ಸರ್ಕಾರ** ಎಂದು ನಮೂದಿಸಲು ಸಭೆಯಲ್ಲಿ ನಿರ್ಣಯಿಸಲಾಗಿರುತ್ತದೆ.<br>8. ಧಾರ್ಮಿಕ ದತ್ತಿ ಇಲಾಖೆಯ ದೇವಾಲಯಗಳಿಗೆ ಸೇರಿದ ಕೆಲವು ಭೂಮಿಯನ್ನು ದೇವರ ಹೆಸರಿನಲ್ಲಿಯೇ ಖಾತೆ/ಪಹಣಿ ಮಾಡಲಾಗಿದೆ. |
| ಇ) | ದೇವನಹಳ್ಳಿಯಲ್ಲಿನ ಸರ್ವೆ ನಂ 306ರ 5.25 ಎಕರೆ ಭೂಮಿಯು ಶ್ರೀ ರಂಗನಾಥ ಸ್ವಾಮಿ ದೇವಸ್ಥಾನದ ಜಾಗವಾಗಿರುವುದು ಸರ್ಕಾರದ ಗಮನದಲ್ಲಿದೆಯೇ; | ದೇವನಹಳ್ಳಿಯಲ್ಲಿನ ಸರ್ವೆ ನಂ 306ರ 5.25 ಎಕರೆ ಭೂಮಿಯು ಶ್ರೀ ರಂಗನಾಥ ಸ್ವಾಮಿ ದೇವಸ್ಥಾನದ ಜಾಗವಾಗಿರುವುದು ಗಮನಕ್ಕೆ ಬಂದಿರುತ್ತದೆ. |
| ಈ) | ದೇವಸ್ಥಾನದ ಜಮೀನು ಮತ್ತು ತೋಪು ಸಾರಿಗೆ ಇಲಾಖೆಗೆ ಹಸ್ತಾಂತರಿಸುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ದೇವಸ್ಥಾನದ ಜಮೀನಿನ ರೀತಿಯಲ್ಲೇ ವಕ್ಫ್ ಬೋರ್ಡ್‌ನ ಭೂಮಿಯನ್ನು ಸಾರಿಗೆ ಇಲಾಖೆ ತನ್ನ ವಶಕ್ಕೆ ಪಡೆಯುವ ಚಿಂತನೆ ನಡೆಸಿದೆಯೇ; ಈ ಕುರಿತು ಸರ್ಕಾರದ ನಿಲುವೇನು; (ವಿವರ ನೀಡುವುದು) | ದೇವಸ್ಥಾನದ ಜಮೀನು ಸಾರಿಗೆ ಇಲಾಖೆಗೆ ಹಸ್ತಾಂತರಿಸುವ ವಿಷಯ ಗಮನಕ್ಕೆ ಬಂದಿರುತ್ತದೆ.<br><br>ಸಾರಿಗೆ ಇಲಾಖೆಯು ನೀಡಿರುವ ಮಾಹಿತಿಯನುಸಾರ ದೇವನಹಳ್ಳಿ ಗ್ರಾಮದ ಸರ್ವೆ ನಂ.306 ರಲ್ಲಿ ಮುಜರಾಯಿ ಇಲಾಖೆಯ ಶ್ರೀ ರಂಗನಾಥಸ್ವಾಮಿ ಸ್ವಾಮಿ ದೇವಸ್ಥಾನ ಮತ್ತು ಟಿ.ಬಿ. ತೋಪು ಹೆಸರಿನಲ್ಲಿರುವ 05 ಎಕರೆ 25 ಗುಂಟೆ ಜಮೀನಿನ ಪೈಕಿ ನೂತನ ವಿದ್ಯುತ್ ಚಾಲಿತ ವಾಹನಗಳ ಘಟಕ ನಿರ್ಮಾಣಕ್ಕಾಗಿ 05 ಎಕರೆ ಜಮೀನನ್ನು ಗುತ್ತಿಗೆ ಆಧಾರದಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೆ ಹಂಚಿಕೆ ಮಾಡಲು ಕೋರಿ ವ್ಯವಸ್ಥಾಪಕ ನಿರ್ದೇಶಕರು, ಧಾರ್ಮಿಕ ದತ್ತಿ ಮತ್ತು ಮುಜರಾಯಿ ಇಲಾಖೆ ಬೆಂಗಳೂರು ಇವರಿಂದ ಆಯುಕ್ತರು, |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ಧಾರ್ಮಿಕ ದತ್ತಿ ಇಲಾಖೆ ಇವರಿಗೆ ದಿನಾಂಕ:12.12.2025 ರಂದು ಪತ್ರ ಬರೆಯಲಾಗಿರುತ್ತದೆ.<br><br>ಸಾರಿಗೆ ಇಲಾಖೆಯ ನಾಲ್ಕು ಸಾರಿಗೆ ನಿಯಮ / ಸಂಸ್ಥೆಗಳು ವಕ್ಫ್ ಬೋರ್ಡ್‌ನ ಯಾವುದೇ ಭೂಮಿಯನ್ನು ವಶಕ್ಕೆ ಪಡೆಯುವ ಚಿಂತನೆ ನಡೆಸಿರುವುದಿಲ್ಲ.<br><br>ಮುಂದುವರೆದು, ಧಾರ್ಮಿಕ ದತ್ತಿ ಇಲಾಖೆಯ ಆಡಳಿತಕ್ಕೆ ಒಳಪಟ್ಟಿರುವ ಈ ಕೆಳಕಂಡ ಎರಡು ಅಧಿಸೂಚಿತ ಸಂಸ್ಥೆಗಳಿಗೆ ಸೇರಿದ ಜಮೀನುಗಳನ್ನು ಸಾರಿಗೆ ಇಲಾಖೆಗೆ ಕಾಯ್ದಿರಿಸಿ ಸರ್ಕಾರವು ಆದೇಶ ಹೊರಡಿಸಿರುತ್ತದೆ.<br>• ಚಾಮರಾಜನಗರ ಜಿಲ್ಲೆ ಯಳಂದೂರು ತಾಲ್ಲೂಕು, ಬಿಳಿಗಿರಿರಂಗನಬೆಟ್ಟ ಗ್ರಾಮದ ಸರ್ವೆ ನಂ 4/56 ರಲ್ಲಿ ಶ್ರೀ ಬಿಳಿಗಿರಿ ರಂಗನಾಥಸ್ವಾಮಿ ದೇವಾಲಯಕ್ಕೆ ಸೇರಿದ 87.20 ಎಕರೆ ಜಮೀನಿನ ಪೈಕಿ 0.24 ಎಕರೆ ಜಮೀನನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಚಾಮರಾಜನಗರ ವಿಭಾಗ, ಚಾಂರಾಜನಗರ ಇವರಿಗೆ ಬಸ್‌ನಿಲ್ದಾಣ ನಿರ್ಮಿಸುವ ಸಲುವಾಗಿ ಸಾರ್ವಜನಿಕ ಉದ್ದೇಶಕ್ಕೆ ಉಚಿತವಾಗಿ ನೀಡಿ ಸರ್ಕಾರದ ಆದೇಶ ಸಂಖ್ಯೆ ಕಂ.28.ಮುಆಬಿ.2019 ದಿನಾಂಕ:08-07-2020 ರನ್ವಯ ಕಾಯ್ದಿರಿಸಲು ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ಅಧಿನಿಯಮ ಕಾಯ್ದೆ 1997ರ ಕಲಂ 62ರನ್ವಯ ಮಂಜೂರಾತಿ ನೀಡಲಾಗಿರುತ್ತದೆ.<br>• ದಕ್ಷಿಣ ಕನ್ನಡ ಜಿಲ್ಲೆ, ಕಡಬ ತಾಲ್ಲೂಕು ಶ್ರೀ ಕುಕ್ಕೆ ಸುಬ್ರಹ್ಮಣ್ಯಸ್ವಾಮಿ ದೇವಾಲಯಕ್ಕೆ ಸೇರಿದ ಸರ್ವೆ ನಂಬರ್ 83/1 ಹಾಗೂ 61/4ರಲ್ಲಿನ ಒಟ್ಟು 2 ಎಕರೆ ಜಮೀನನ್ನು ಸಾರ್ವಜನಿಕ ಉದ್ದೇಶಕ್ಕೆ ಉಚಿತವಾಗಿ ನೀಡಿ ಈ ಹಿಂದೆ ಆಯುಕ್ತರು. ಧಾರ್ಮಿಕ ದತ್ತಿ ಇಲಾಖೆ, ಇವರ ಆದೇಶ ಸಂಖ್ಯೆ ಎಡಿಎಂ.7.ಪಿಟಿಎನ್.ಸಿಆರ್.5/ 96-97 ದಿನಾಂಕ:13-06-1996ರ ಅನ್ವಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಬಸ್ ನಿಲ್ದಾಣ ನಿರ್ಮಾಣಕ್ಕಾಗಿ ನೀಡಲಾಗಿರುತ್ತದೆ. |
| ಉ) | ಇಲ್ಲಿಯವರೆಗೆ ಸಾರಿಗೆ ಇಲಾಖೆಯು ಮುಜರಾಯಿ ಇಲಾಖೆಯ ಎಷ್ಟು ಎಕರೆ ಜಮೀನನ್ನು ವಶಕ್ಕೆ ಉಚಿತವಾಗಿ ಪಡೆದುಕೊಂಡಿದೆ? (ವಿವರ ನೀಡುವುದು) | ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವ್ಯಾಪ್ತಿಯ ಕುಕ್ಕೆ ಸುಬ್ರಮಣ್ಯದಲ್ಲಿ ಬಸ್ಸು ನಿಲ್ದಾಣ ನಿರ್ಮಿಸಲು 2.00 ಎಕರೆ ನಿವೇಶನವನ್ನು ಧಾರ್ಮಿಕ ದತ್ತಿ ಇಲಾಖೆಯಿಂದ ದಿನಾಂಕ 12.11.1997 ರಲ್ಲಿ ದಾನಪತ್ರದ ಮುಖೇನ ಉಚಿತವಾಗಿ ನೀಡಲಾಗಿರುತ್ತದೆ<br><br>ಚಾಮರಾಜನಗರ ಜಿಲ್ಲೆ ಯಳಂದೂರು ತಾಲ್ಲೂಕು, ಬಿಳಿಗಿರಿರಂಗನಬೆಟ್ಟ ಗ್ರಾಮದ ಸರ್ವೆ ನಂ. 4/56 ರಲ್ಲಿ ಶ್ರೀ ಬಿಳಿಗಿರಿ ರಂಗನಾಥಸ್ವಾಮಿ ದೇವಾಲಯಕ್ಕೆ ಸೇರಿದ 87.20 ಎಕರೆ ಜಮೀನಿನ ಪೈಕಿ 0.24 ಎಕರೆ ಜಮೀನನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಚಾಮರಾಜನಗರ ವಿಭಾಗ, |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ಚಾಂರಾಜನಗರ ಇವರಿಗೆ ಬಸ್ ನಿಲ್ದಾಣ ನಿರ್ಮಿಸುವ ಸಲುವಾಗಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆ, ಕಡಬ ತಾಲ್ಲೂಕು ಶ್ರೀ ಕುಕ್ಕೆ ಸುಬ್ರಹ್ಮಣ್ಯಸ್ವಾಮಿ ದೇವಾಲಯಕ್ಕೆ ಸೇರಿದ ಸರ್ವೆ ನಂಬರ್ 83/1 ಹಾಗೂ 61/4ರಲ್ಲಿನ ಒಟ್ಟು 2 ಎಕರೆ ಜಮೀನನ್ನು ಸಾರ್ವಜನಿಕ ಉದ್ದೇಶಕ್ಕೆ ಉಚಿತವಾಗಿ ಧಾರ್ಮಿಕ ದತ್ತಿ ಇಲಾಖೆಯ ವತಿಯಿಂದ ನೀಡಲಾಗಿರುತ್ತದೆ.<br><br>ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ / ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ / ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳು ಮುಜರಾಯಿ ಇಲಾಖೆಯಿಂದ ಈವರೆವಿಗೂ ಯಾವುದೇ ಜಮೀನನ್ನು ಉಚಿತವಾಗಿ ನೀಡಿರುವುದಿಲ್ಲ. |

ಸಂಖ್ಯೆ: ಕಂಇ 138 ಮುಸಪ್ರ 2026

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು